# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1986

ಸದಸ್ಯರ ಹೆಸರು : ಶ್ರೀ ಎಫ್.ಹೆಚ್. ಜಕ್ಕಪ್ಪನವರ್ (ನಾಮನಿರ್ದೇಶನ ಹೊಂದಿದವರು)

ಉತ್ತರಿಸಬೇಕಾದ ದಿನಾಂಕ : 24-03-2026

ಉತ್ತರಿಸುವ ಸಚಿವರು : ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮಂಗಳೂರು ಮಹಾನಗರ ಪಾಲಿಕೆಯು 2019-20ನೇ ಸಾಲಿನಲ್ಲಿ 'ಮಹಾತ್ಮ ಗಾಂಧಿ ನಗರ ವಿಕಾಸ ಯೋಜನೆ'ಯಡಿಯಲ್ಲಿ ಸಮಾಜ ಸುಧಾರಕ ಕುದ್ಮುಲ್ ರಂಗರಾವ್ ಅವರ ಪುಣ್ಯಭೂಮಿ ಸ್ಮಾರಕ ಅಭಿವೃದ್ಧಿಪಡಿಸಲು ರೂ.3.00 ಕೋಟಿ (ಮೂರು ಕೋಟಿ ರೂಪಾಯಿ) ಅನುದಾನವನ್ನು ಮೀಸಲಿಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, ಮಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ 55ನೇ ಅತ್ತಾವರ ವಾರ್ಡಿನಲ್ಲಿ "ಕುದ್ಮುಲ್ ರಂಗರಾವ್ ಅವರ ಸಮಾಧಿ ಬಳಿ ಪ್ರವಾಸಿ ತಾಣ ಮತ್ತು ಸಮಗ್ರ ಅಭಿವೃದ್ಧಿ" ಕಾಮಗಾರಿಯನ್ನು ಮಹಾತ್ಮ ಗಾಂಧಿ ನಗರ ವಿಕಾಸ ಯೋಜನೆ-1.0 ರ ಕ್ರಿಯಾಯೋಜನೆರಡಿ ಮೊತ್ತ ರೂ.300.00 ಲಕ್ಷಗಳಿಗೆ ಅನುಮೋದನೆಗೊಂಡಿರುತ್ತದೆ. |
| ಆ) | ಸದರಿ ಯೋಜನೆಯು ಅನುಮೋದನೆಗೊಂಡು ಸುಮಾರು 4-5 ವರ್ಷಗಳೇ ಕಳೆದಿದ್ದರೂ, ಮೀಸಲಿಟ್ಟ ಹಣವನ್ನು ಇಲ್ಲಿಯವರೆಗೆ ಸ್ಮಾರಕದ ಅಭಿವೃದ್ಧಿ ಕಾರ್ಯಕ್ಕೆ ಬಳಸದೇ ಇರಲು ಕಾರಣಗಳೇನು; (ಸಂಪೂರ್ಣ ವಿವರ ನೀಡುವುದು) | ಮಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ 55ನೇ ಅತ್ತಾವರ ವಾರ್ಡಿನ 0.40 ಎಕರೆ ಜಮೀನಿನಲ್ಲಿ ಕುದ್ಮುಲ್ ರಂಗರಾವ್ ಅವರ ಸಮಾಧಿ ಬಳಿ ಪ್ರವಾಸಿ ತಾಣ ಮತ್ತು ಸಮಗ್ರ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳುವ ಕುರಿತು ಸಹಾಯಕ ಆಯುಕ್ತರು, ಮಂಗಳೂರು ಉಪ ವಿಭಾಗ, ಮಂಗಳೂರು ರವರ ದಿನಾಂಕ:07-07-2021 ರ ನಡವಳಿಯಲ್ಲಿ "ಅತ್ತಾವರ ಗ್ರಾಮದ ಸರ್ವೆ ನಂಬರ್ 251/1 ರಲ್ಲಿ 0.40 ಎಕರೆ ಜಮೀನನ್ನು ಕುದ್ಮುಲ್ ರಂಗರಾವ್ ಅವರ ಸಮಾಧಿ ಬಳಿ ಪ್ರವಾಸಿ ತಾಣ ಮತ್ತು ಸಮಗ್ರ ಅಭಿವೃದ್ಧಿ ಬಗ್ಗೆ, ಮಂಗಳೂರು ಮಹಾನಗರ ಪಾಲಿಕೆ, ಮಂಗಳೂರು ರವರ ಹೆಸರಿನಲ್ಲಿ ಕರ್ನಾಟಕ ಭೂಕಂದಾಯ ಕಾಯ್ದೆ 1964 ರ ಕಲಂ-71 ರಂತೆ ಜಮೀನು ಕಾಯ್ದಿರಿಸಲಾಗಿರುತ್ತದೆ". |

| | | |
|---|---|---|
| | | ಪ್ರಸ್ತುತ, ಕಾಯ್ದಿರಿಸಿದ ಜಮೀನಿನಲ್ಲಿ ಸಾರ್ವಜನಿಕರು ಬೆಳೆಸಿದ ಮರಗಳು ಇದ್ದುದ್ದರಿಂದ ಸದರಿ ಮರಗಳನ್ನು ಸ್ಥಳಾಂತರಿಸಲು ಅರಣ್ಯ ಇಲಾಖೆಗೆ ಅನುಮತಿ ಕೋರಿ ದಿನಾಂಕ:01-06-2022 ರಂದು ಕಾರ್ಯಪಾಲಕ ಅಭಿಯಂತರರು, ಇಂಜಿನಿಯರ್ ವಿಭಾಗ, ಮಹಾನಗರ ಪಾಲಿಕೆ ಮಂಗಳೂರು ರವರಿಂದ ಪತ್ರ ಬರೆಯಲಾಗಿರುತ್ತದೆ.<br><br>ಆದರೆ ಅರಣ್ಯ ಇಲಾಖೆಯಿಂದ ಅನುಮತಿ ದೊರೆಯದೆ ಇರುವ ಕಾರಣ ಕಾಮಗಾರಿ ಮುಂದುವರೆಸಲಾಗಿರುವುದಿಲ್ಲ. |
| ಇ) | ಈ ಯೋಜನೆಯ ವಿಳಂಬಕ್ಕೆ ಕಾರಣರಾದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ, ಈ ಅನುದಾನವು ಬೇರೆ ಯಾವುದಾದರು ಉದ್ದೇಶಕ್ಕೆ ಬಳಕೆಯಾಗಿದೆಯೇ ಅಥವಾ ಸರ್ಕಾರದ ಖಜಾನೆಯಲ್ಲಿ ಬಾಕಿ ಇದೆಯ; | ಅರಣ್ಯ ಇಲಾಖೆಯಿಂದ ಅನುಮತಿ ದೊರೆಯದೆ ಕಾಮಗಾರಿ ಪ್ರಾರಂಭಿಸಿರುವುದಿಲ್ಲ. ಸದರಿ ಅನುದಾನವನ್ನು ಬೇರೆ ಯಾವುದೇ ಉದ್ದೇಶಕ್ಕೆ ಬಳಕೆಯಾಗಿರುವುದಿಲ್ಲ. |
| ಈ) | ಮಹಾನ್ ಚೇತನ ಕುದ್ಮುಲ್ ರಂಗರಾವ್ ಅವರ ಸ್ಮಾರಕವನ್ನು ಗೌರವಯುತವಾಗಿ ಅಭಿವೃದ್ಧಿಪಡಿಸಲು ಸರ್ಕಾರವು ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಿದೆ? | ಅರಣ್ಯ ಇಲಾಖೆಯಿಂದ ಅನುಮತಿ ದೊರೆತ ಕೂಡಲೇ ಅನುದಾನದ ಲಭ್ಯತೆ ಮೇರೆಗೆ ಶೀಘ್ರವಾಗಿ ಕಾಮಗಾರಿ ಕೈಗೊಳ್ಳಲಾಗುವುದು. |

ಸಂಖ್ಯೆ:ನಅಇ 78 ಎಸ್ಎಫ್‌ಸಿ 2026

**(ಬಿ.ಎಸ್. ಸುರೇಶ್)**
ನಗರಾಭಿವೃದ್ಧಿ ಮತ್ತು
ನಗರ ಯೋಜನೆ ಸಚಿವರು